Akashvani: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

15.10.2026: 14.30hrs

*********

**ಮುಖ್ಯಾಂಶಗಳು:**

- ಹಸ್ತಾಂತರ ಬಳಿಕವೂ ಗ್ರಾಮ ಪಂಚಾಯತ್‌ಗಳ ಬ್ಯಾಂಕ್ ಖಾತೆ ವಹಿವಾಟು; ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ
- ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಂಪುಟ ಸಭೆ ಪ್ರಗತಿಯಲ್ಲಿ
- ರಹಸ್ಯ ಕಾರ್ಯಾಚರಣೆ ವಿಚಾರ; ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸುವಂತೆ ಕೇಂದ್ರ ಸಚಿವ ಕುಮಾರಸ್ವಾಮಿ ಆಗ್ರಹ
- ಮಂಗಳೂರು ದಸರಾ ಮಹೋತ್ಸವಕ್ಕೆ ಇಂದು ಮುಖ್ಯಮಂತ್ರಿ ಚಾಲನೆ
- ತಮಿಳುನಾಡಿಗೆ ನೀರು ಬಿಡುಗಡೆ ಮಾಡಿದ ಹಿನ್ನೆಲೆ; ೧೦೦ ಅಡಿ ತಲುಪಿದ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ

***********

ಗ್ರಾಮ ಪಂಚಾಯಿತಿಗಳು, ಪಟ್ಟಣ ಪಂಚಾಯಿತಿಯಾಗಿ, ಇಲ್ಲವೆ ನಗರಸಭೆ, ನಗರ ಪಾಲಿಕೆಯಲ್ಲಿ ಸೇರ್ಪಡೆಯಾಗಿ, ಸಂಪೂರ್ಣ ಹಸ್ತಾಂತರವಾದ ಬಳಿಕವೂ, ಗ್ರಾಮ ಪಂಚಾಯತ್ ಬ್ಯಾಂಕ್ ಖಾತೆಗಳಲ್ಲಿ ವಹಿವಾಟು ನಡೆದಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ, ವರದಿ ಸಲ್ಲಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಕಾರ್ಯದರ್ಶಿಗೆ ಲಿಖಿತ ಸೂಚನೆ ನೀಡಿದ್ದು, ತನಿಖೆ ನಡೆಸುವಂತೆ ಆದೇಶಿಸಿದ್ದಾರೆ. ಹಸ್ತಾಂತರವಾಗಿರುವ ಗ್ರಾಮ ಪಂಚಾಯಿತಿಗಳ ಬ್ಯಾಂಕ್ ಖಾತೆಗಳಲ್ಲಿ ಅಕ್ರಮವಾಗಿ ವಹಿವಾಟು ನಡೆದಿದೆಯೇ, ಗ್ರಾಮಗಳ ಕಾಮಗಾರಿಗೆ ಪಂಚಾಯಿತಿ ವತಿಯಿಂದ ಹಣ ಭರಿಸಲಾಗಿದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಲು ಒಂದು ಸಮಿತಿ ರಚಿಸುವಂತೆ ನಿರ್ದೇಶನ ನೀಡಿದ್ದಾರೆ. ಈ ಕುರಿತ ವರದಿಯನ್ನು ೩೦ ದಿನಗಳೊಳಗಾಗಿ ಸಲ್ಲಿಸಲು ಸೂಚಿಸಿದ್ದಾರೆ. ಅಕ್ರಮ ನಡೆದಿರುವುದು ಮೇಲ್ನೋಟಕ್ಕೆ ಕಂಡುಬಂದಲ್ಲಿ ಸಂಬಂಧಿತ ಸಿಬ್ಬಂದಿಯನ್ನು ಅಮಾನತು ಮಾಡಿ, ಸ್ಥಳೀಯ ಪೊಲೀಸ್ ಠಾಣೆಗೆ ದೂರು ದಾಖಲಿಸಿ, ಎಫ್‌ಐಆರ್ ದಾಖಲಿಸುವಂತೆ ತಿಳಿಸಿದ್ದಾರೆ.

***********

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಂಪುಟ ಸಭೆ ನಡೆಯುತ್ತಿದೆ. ಇಂದಿನ ಸಭೆಯಲ್ಲಿ ೨೦೦೩ರಲ್ಲಿ ಸಂಚಲನ ಮೂಡಿಸಿದ್ದ ರಿಂಗ್ ರೋಡ್ ಶುಭಾ ಪ್ರಕರಣದ ಅಪರಾಧಿಗಳಾದ ಶುಭಾ ಶಂಕರ ನಾರಾಯಣ ಮತ್ತು ಡಿ. ಅರುಣ್ ವರ್ಮಾ ಸಲ್ಲಿಸಿರುವ ಕ್ಷಮಾಧಾನ ಅರ್ಜಿಗಳ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ಪ್ರಕರಣದಲ್ಲಿ ಭಾಗಿಯಾಗಿದ್ದ ನಾಲ್ವರು ಆರೋಪಿಗಳಿಗೆ ವಿಧಿಸಲಾಗಿದ್ದ ಜೀವಾವಧಿ ಶಿಕ್ಷೆಯನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿತ್ತು. ಈ ನಡುವೆ ಶುಭಾ ರಾಜ್ಯಪಾಲರಿಗೆ ಕ್ಷಮಾಧಾನ ಅರ್ಜಿ ಸಲ್ಲಿಸಿದ್ದು, ರಾಜ್ಯಪಾಲರ ಕಾರ್ಯಾಲಯವು ಅರ್ಜಿಯನ್ನು ಪರಿಶೀಲನೆ ನಡೆಸುವಂತೆ ರಾಜ್ಯ ಗೃಹ ಇಲಾಖೆಗೆ ರವಾನಿಸಿದೆ. ಈ ಹಿನ್ನೆಲೆಯಲ್ಲಿ ಇಂದಿನ ಸಂಪುಟ ಸಭೆಯಲ್ಲಿ ಈ ಕುರಿತಂತೆ ಚರ್ಚೆ ನಡೆಯುವ ಸಾಧ್ಯತೆ ಇದೆ.

***********

ರಾಜ್ಯದಲ್ಲಿ ನಡೆದಿದೆ ಎನ್ನಲಾದ ರಹಸ್ಯ ಕಾರ್ಯಾಚರಣೆ ಕುರಿತಂತೆ ತಮ್ಮನ್ನು ಗುರಿಯಾಗಿಸಲು ಪೊಲೀಸ್ ಇಲಾಖೆ ಮತ್ತು ಸರ್ಕಾರಿ ಯಂತ್ರವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮನ್ನು ಬಂಧಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಸವಾಲು ಹಾಕಿದ್ದಾರೆ. ರಹಸ್ಯ ಕಾರ್ಯಾಚರಣೆ ಕುರಿತು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

***********

ರಾಜ್ಯ ಮತ್ತು ಮಹಾರಾಷ್ಟ್ರದ ಕಬ್ಬು ಬೆಳೆಗಾರರ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸಲು ಹಾಗೂ ಸಮಸ್ಯೆಗಳನ್ನು ಪರಿಶೀಲಿಸಲು ಕೇಂದ್ರ ಸರ್ಕಾರ ಉನ್ನತ ಮಟ್ಟದ ಸಮಿತಿ ರಚಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಧನ್ಯವಾದ ಸಲ್ಲಿಸಿದ್ದಾರೆ. ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸಮಗ್ರ ಪರಿಹಾರ ಕಂಡುಕೊಳ್ಳಲು ನೀತಿ ಆಯೋಗದ ಮಾಜಿ ಸದಸ್ಯ ಪ್ರೊಫೆಸರ್ ರಮೇಶ್ ಚಂದ್ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ ಎಂದು ವಿಜಯೇಂದ್ರ ಹೇಳಿಕೆಯಲ್ಲಿ ತಿಳಿಸಿದ್ದಾರೆ. ರೈತರ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಸಕಾರಾತ್ಮಕವಾಗಿ ಸ್ಪಂದಿಸಿದ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

***********

ಮಂಗಳೂರು ದಸರಾ ಮಹೋತ್ಸವಕ್ಕೆ ಇಂದು ಸಂಜೆ ಚಾಲನೆ ದೊರೆಯಲಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದಸರಾ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ. ಸಂಜೆ ೪.೧೦ಕ್ಕೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ಮುಖ್ಯಮಂತ್ರಿ, ಕಾಪು ಉಚ್ಚಿಲ ಮಹಾಲಕ್ಷ್ಮಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಮಹಿಳಾ ದಸರಾ ಉದ್ಘಾಟನೆ ಹಾಗೂ ಮುಖ್ಯಮಂತ್ರಿಗಳ ಅಭಿನಂದನಾ ಸಮಾರಂಭ ನಡೆಯಲಿದೆ. ಬಳಿಕ ಮಂಗಳೂರಿಗೆ ಆಗಮಿಸಲಿರುವ ಅವರು, ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರಕ್ಕೆ ಆಗಮಿಸಿ ಮಂಗಳೂರು ದಸರಾ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ.

***********

ಸಿಡಬ್ಲೂಆರ್ಸಿ, ಸಿಡಬ್ಲೂಎಂಎ ಹಾಗೂ ಸುಪ್ರೀಂಕೋರ್ಟ್ ಆದೇಶದ ಮೇರೆಗೆ ನಿರಂತರವಾಗಿ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡಿದ ಪರಿಣಾಮ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ನೀರಿನ ಮಟ್ಟ ೧೦೦ ಅಡಿಗೆ ಬಂದು ತಲುಪಿದೆ. ೧೨೪.೮೯ ಅಡಿ ನೀರಿನ ವಿಸ್ತೀರ್ಣ ಹೊಂದಿರುವ ಆಣೆಕಟ್ಟೆಯಲ್ಲಿ ಪ್ರಸ್ತುತ ನೀರಿನ ಮಟ್ಟ ೧೦೦ ಅಡಿ ಮಾತ್ರ ಇದೆ. ಜಲಾಶಯಕ್ಕೆ ೫೭೬ ಕ್ಯೂಸೆಕ್ ಒಳ ಹರಿವಿದ್ದು, ಜಲಾಶಯದಿಂದ ೨ ಸಾವಿರದ ೬೫೮ ಕ್ಯೂಸೆಕ್ ನೀರನ್ನು ನದಿಗೆ ಹರಿಬಿಡಲಾಗುತ್ತಿದೆ. ಕೆ.ಆರ್.ಎಸ್. ಆಣೆಕಟ್ಟೆಯಲ್ಲಿ ನೀರು ಕುಸಿದಿರುವ ಪರಿಣಾಮ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಬಹುದು ಎಂದು ಅಂದಾಜಿಸಲಾಗಿದೆ.

***********

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಆಯುಷ್ಮಾನ್ ಭಾರತ್ ಪಿಎಂ-ಜೆಎವೈ' ಕುರಿತ ಒಂದು ವರದಿ ಇದೀಗ ಮೂಡಿ ಬರಲಿದೆ. ಬಡ ಮತ್ತು ನಿರ್ಗತಿಕ ಕುಟುಂಬಗಳಿಗೆ ವರ್ಷಕ್ಕೆ ೫ ಲಕ್ಷದವರೆಗೆ ನಗದುರಹಿತ ಆರೋಗ್ಯ ವಿಮೆಯನ್ನು ಒದಗಿಸುವ ಉದ್ದೇಶದಿಂದ ೨೦೧೮ ರಲ್ಲಿ ಪ್ರಾರಂಭವಾದ ಆಯುಷ್ಮಾನ್ ಭಾರತ್-ಪಿಎಂ-ಜೆಎವೈ ಯೋಜನೆಯು ಬಡತನ ಮತ್ತು ಆರೋಗ್ಯ ಸೇವೆಯ ನಡುವಿನ ಸಂಬಂಧವನ್ನೇ ಬದಲಾಯಿಸಿದೆ. ಪ್ರತಿ ಕುಟುಂಬಕ್ಕೆ ವಾರ್ಷಿಕ ೫ ಲಕ್ಷದವರೆಗಿನ ನಗದು ರಹಿತ ಚಿಕಿತ್ಸಾ ರಕ್ಷಣೆಯನ್ನು ಒದಗಿಸುವ ಈ ಯೋಜನೆಯು, ಭಾರತದ ಶೇಕಡ ೪೦ರಷ್ಟು ಅತ್ಯಂತ ಬಡ ಜನಸಂಖ್ಯೆಯನ್ನು ಗುರಿಯಾಗಿಸಿಕೊಂಡಿದೆ.

***********

ಬೆಂಗಳೂರು ಆಕಾಶವಾಣಿ ನಿಲಯದಲ್ಲಿಂದು ಆಯೋಜಿಸಲಾಗಿದ್ದ ವಿವಿಧ ಭಾರತಿಯ ೫೬ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಖ್ಯಾತ ಉದಯ್ ಜಾದೂಗಾರ್ ಭಾಗವಹಿಸಿದ್ದರು. ಹಲವಾರು ವರ್ಷಗಳಿಂದ ಸಕ್ರಿಯ ಜೀವನದಿಂದ ದೂರ ಉಳಿದ ತಾವು, ಮತ್ತೊಮ್ಮೆ ಸಾರ್ವಜನಿಕರೊಂದಿಗೆ ಸಂಪರ್ಕ ಕಲ್ಪಿಸುವ ಇಂಗಿತ ವ್ಯಕ್ತಪಡಿಸಿದ ಅವರು, ಆಕಾಶವಾಣಿಯಲ್ಲಿ ಅವರು ಭಾಗವಹಿಸಿದ ಕಾರ್ಯಕ್ರಮದ ಕುರಿತು ಪ್ರಸ್ತಾಪಿಸಿದರು.

****ಧ್ವನಿ****ಉದಯ್ ಜಾದೂಗಾರ್

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನಿಲಯ ಮುಖ್ಯಸ್ಥರಾದ ಕೆ.ಪಿ. ಸಂಜೀವ್, ವಿವಿಧ ಭಾರತೀಯ ವಾಹಿನಿಯಲ್ಲಿ ಸೇವೆ ಸಲ್ಲಿಸಿದ ಪೂರ್ವ ಹಾಗೂ ಹಾಲಿ ಅಧಿಕಾರಿಗಳು ಮತ್ತು ತಾಂತ್ರಿಕ ವರ್ಗಕ್ಕೆ ಧನ್ಯವಾದ ತಿಳಿಸಿದರು. ವಿವಿಧ ಭಾರತಿಯಲ್ಲಿ ಮೂಡಿಬರುವ ಕಾರ್ಯಕ್ರಮಗಳು ಮತ್ತಷ್ಟು ಸದಾಭಿರುಚಿಯಿಂದ ಕೂಡಿರಲಿ ಎಂದು ಕೋರಿದ ಅವರು, ಜೆನ್‌ಜಿಗೆ ರುಚಿಸುವ ಕಾರ್ಯಕ್ರಮಗಳತ್ತಲೂ ಗಮನಹರಿಸುವಂತೆ ಸಲಹೆ ನೀಡಿದರು.

***********

ರಾಜ್ಯ ಸರ್ಕಾರದ ಸಾರ್ವಜನಿಕ ಉದ್ಯಮಗಳ ಸಮಿತಿಯು ಇಂದು ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಎತ್ತಿನಹೊಳೆ ಯೋಜನೆಯ ಕಾಮಗಾರಿ ವೀಕ್ಷಣೆ ನಡೆಸಿತು. ಸಮಿತಿ ಸದಸ್ಯರಾದ ಡಾ|| ಎಂ.ಸಿ.ಸುಧಾಕರ್ ಮಾತನಾಡಿ, ಎತ್ತಿನಹೊಳೆ ಯೋಜನೆಯ ಪ್ರಗತಿ ಮತ್ತು ಮಹಾಲೇಖಪಾಲರ ಕೆಲವು ಆಕ್ಷೇಪಣೆಗಳ ಬಗ್ಗೆ ಖುದ್ದಾಗಿ ಪರಿಶೀಲನೆ ನಡೆಸಬೇಕೆಂಬ ಉದ್ದೇಶದಿಂದ ಭೇಟಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಯೋಜನೆಯ ಪ್ರಗತಿಯ ಬಗ್ಗೆ ಅಧ್ಯಯನ ನಡೆಸಿ, ಸಮಿತಿಯಲ್ಲಿ ವಿಸ್ತೃತವಾಗಿ ಚರ್ಚೆ ನಡೆಸಿ ವರದಿ ನೀಡಲಾಗುವುದು ಎಂದು ಹೇಳಿದ್ದಾರೆ. ಕಳೆದ ೫೫ ರಿಂದ ೬ ವರ್ಷದ ಸರಾಸರಿ ಮಳೆಮಾಪನದ ಅಂಕಿಅಂಶಗಳನ್ನು ಗಮನಿಸಿದರೆ ೧೪.೫ ಟಿ.ಎಂ.ಸಿ.ಕುಡಿಯುವ ನೀರು ಏಳು ಜಿಲ್ಲೆಗಳಿಗೆ ಲಭಿಸಲಿದೆ ಎಂದು ತಿಳಿಸಿದ್ದಾರೆ.

***********

**ಸಂಕ್ಷಿಪ್ತ ಸುದ್ದಿ**

೧. ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಸನ ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೨. ರಾಮನಗರ ಜಿಲ್ಲೆಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದ್ದು, ಅಂತಿಮ ಮತದಾರರ ಪಟ್ಟಿಯನ್ನು ಇದೇ ೨೭ರಂದು ಪ್ರಕಟಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿ ಯಶವಂತ್ ವಿ. ಗುರುಕರ್ ತಿಳಿಸಿದ್ದಾರೆ.

೩. ಚಿತ್ರದುಗದ ಚಳ್ಳಕೆರೆ ತಾಲೂಕಿನ ಬೊಮ್ಮಸಮುದ್ರ ಗ್ರಾಮದ ಗ್ರಾಮೀಣ ಪ್ರತಿಭೆ, ವಿ. ರಾಧಾ ವೆಂಕಟೇಶ್, ಜಪಾನ್‌ನಲ್ಲಿ ಅಕ್ಟೋಬರ್ ೧೭ರಿಂದ ೨೯ರವರೆಗೆ ನಡೆಯಲಿರುವ ಪ್ಯಾರಾ ಅಥ್ಲೆಟಿಕ್ಸ್ ಕ್ರೀಡಾಕೂಟದ ೧೫೦೦ ಮೀಟರ್ ಓಟದ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲು ಅಧಿಕೃತವಾಗಿ ಆಯ್ಕೆಯಾಗಿದ್ದಾರೆ.

***********

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳು ಕುಗ್ಗಿದ್ದು, ಬೆಲೆ ಏರಿಕೆ ಮತ್ತು ಭ್ರಷ್ಟಾಚಾರ ಹೆಚ್ಚಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಆರೋಪಿಸಿದ್ದಾರೆ. ಧಾರವಾಡದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯ ಹಣ ಪಾವತಿಯಲ್ಲಿ ವಿಳಂಬ, ಶಕ್ತಿ ಯೋಜನೆಯಿಂದ ಕೆಎಸ್‌ಆರ್‌ಟಿಸಿ ಎದುರಿಸುತ್ತಿರುವ ಆರ್ಥಿಕ ಸಂಕಷ್ಟ ಹಾಗೂ ವಿವಿಧ ಶುಲ್ಕಗಳ ಹೆಚ್ಚಳವನ್ನು ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೆಪಿಎಸ್‌ಸಿ ಭ್ರಷ್ಟಾಚಾರ ಪ್ರಕರಣದಲ್ಲಿ ಹಿರಿಯ ಅಧಿಕಾರಿಗಳು ಹಾಗೂ ಆರಕ್ಕೂ ಹೆಚ್ಚು ಸಚಿವರು ಭಾಗಿಯಾಗಿದ್ದಾರೆ ಎಂಬ ಮಾಹಿತಿ ಇದ್ದು, ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ನಡೆಯುತ್ತಿದೆ ಎಂಬ ಅನುಮಾನವಿದೆ ಎಂದು ತಿಳಿಸಿದ್ದಾರೆ.

******END*****